# ಕರ್ನಾಟಕ ರಿಯಲ್‌ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ

ನಂ: 1/14, ನೆಲಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್,
ಸಿ.ಎಸ್.ಐ.ಕಾಂಪೌಂಡ್, 3ನೇ ಕ್ರಾಸ್, ಮಿಷನ್‌ರಸ್ತೆ, ಬೆಂಗಳೂರು-560027

ಸಂಖ್ಯೆ: ರೇರಾ/ಅಕಾ/26/2018-19 ದಿನಾಂಕ: 7/11/2022

## ಅಧಿಕೃತ ಜ್ಞಾಪನ

ವಿಷಯ: ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿ (Public Grievance Management Officer – PGMO) ನೇಮಿಸುವ ಬಗ್ಗೆ

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 29 ಪಿಆರ್‌ಜೆ 2020, ದಿನಾಂಕ 6/12/2020 ಮತ್ತು 9/8/2021

----------

2018-19ನೇ ಸಾಲಿನ ಜುಲೈ ಮಾಹೆಯ ಆಯವ್ಯಯ ಭಾಷಣದಲ್ಲಿ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸಾರ್ವಜನಿಕರು ತಮ್ಮ ಕುಂದುಕೊರತೆ / ದೂರುಗಳನ್ನು ದಾಖಲಿಸಲು ಒಂದು ಸಮಗ್ರವಾದ ಹಾಗೂ ಸದೃಢವಾದ ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆಯನ್ನು (iPGRS) ಕಲ್ಪಿಸಬೇಕು ಎಂದು ಘೋಷಿಸಲಾಗಿರುತ್ತದೆ. ಉಲ್ಲೇಖಿತ ದಿನಾಂಕ 6/12/2020ರ ಆದೇಶದಲ್ಲಿ ಸಾರ್ವಜನಿಕರಿಗಾಗಿ ಹಾಗೂ ರಾಜ್ಯ ಸರ್ಕಾರಿ ನೌಕರರಿಗಾಗಿ ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆಯನ್ನು ರಾಜ್ಯ ಸರ್ಕಾರವು ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. ಉಲ್ಲೇಖಿತ ದಿನಾಂಕ 9/8/2021ರ ಆದೇಶದಲ್ಲಿ ಪ್ರತಿ ಕಛೇರಿಯಲ್ಲಿ ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿ (Public Grievance Management Officer – PGMO) ಯನ್ನು ನೇಮಿಸಿ, ಅವರ ವಿವರಗಳನ್ನು ಕಛೇರಿಯ ಸೂಚನಾ ಫಲಕದಲ್ಲಿ ಮತ್ತು ಜಾಲತಾಣದಲ್ಲಿ ಪ್ರಕಟಿಸುವಂತೆ ಹಾಗೂ ಸ್ವೀಕರಿಸಿದ, ವಿಲೇಯಾದ ಹಾಗೂ ಬಾಕಿ ಇರುವ ಸಾರ್ವಜನಿಕ ದೂರಗಳ ಅಂಕಿ-ಅಂಶಗಳನ್ನು ಪ್ರಕಟಿಸುವಂತೆ ಸೂಚಿಸಿದೆ.

ಈ ಹಿನ್ನಲೆಯಲ್ಲಿ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ಸಾರ್ವಜನಿಕರಿಂದ ಸ್ವೀಕೃತವಾಗಿರುವ ಕುಂದುಕೊರತೆ / ದೂರುಗಳನ್ನು (**ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆ**)ಯಲ್ಲಿ ಸ್ವೀಕರಿಸಲು ಮತ್ತು ವಿಲೇ ಮಾಡಲು ಈ ಕೆಳಕಂಡಂತೆ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.

| | |
|---|---|
| ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿ (Public Grievance Management Officer – PGMO) | ಶ್ರೀ ಈ. ಶಿವರುದ್ರಪ್ಪ,<br>ಜಂಟಿ ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ನಂ: 1/14, ನೆಲಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ.ಕಾಂಪೌಂಡ್, 3ನೇ ಕ್ರಾಸ್, ಮಿಷನ್‌ರಸ್ತೆ, ಬೆಂಗಳೂರು-560027<br>ದೂರವಾಣಿ: 080-22249798 |

ಶಾಖಾಧಿಕಾರಿ-1 ಮತ್ತು ಅಧೀನ ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ ಇವರು ಸ್ವೀಕರಿಸಿದ ಅರ್ಜಿಗಳನ್ನು ವಹಿಯಲ್ಲಿ ದಾಖಲಿಸಿಕೊಂಡು ಪ್ರತಿ ಅರ್ಜಿಯನ್ನು ನಿಯಮಾನುಸಾರ ಪರಿಶೀಲಿಸಿ ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿಯವರಿಗೆ ಸಲ್ಲಿಸಿ ಕ್ರಮ ವಹಿಸುವುದು. ಸ್ವೀಕರಿಸಿದ, ವಿಲೇಯಾದ ಹಾಗೂ ಬಾಕಿ ಇರುವ ಸಾರ್ವಜನಿಕ ದೂರಗಳ ಅಂಕಿ-ಅಂಶಗಳನ್ನು ನಿಗದಿತ ನಮೂನೆಯಲ್ಲಿ ಪ್ರಕಟಿಸಲು ಕ್ರಮ ವಹಿಸುವುದು.

(ಇಬ್ರಾಹಿಂ ಮೈಗೂರ)
ಕಾರ್ಯದರ್ಶಿ, ಕರ್ನಾಟಕ
ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ

ಇವರಿಗೆ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸುಇ (ಇ-ಆಡಳಿತ), ಬಹುಮಹಡಿ ಕಟ್ಟಡ, ಬೆಂಗಳೂರು
2) ಸರ್ಕಾರದ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು
3) ಮಾನ್ಯ ಅಧ್ಯಕ್ಷರು, ಕರ್ನಾಟಕ ರೇರಾ ಇವರ ಆಪ್ತ ಕಾರ್ಯದರ್ಶಿ
4) ಮಾನ್ಯ ಸದಸ್ಯರು-1, ಕರ್ನಾಟಕ ರೇರಾ ಇವರ ಆಪ್ತ ಸಹಾಯಕರು
5) ಮಾನ್ಯ ಸದಸ್ಯರು-2, ಕರ್ನಾಟಕ ರೇರಾ ಇವರ ಆಪ್ತ ಸಹಾಯಕರು
6) ಅಧೀನ ಕಾರ್ಯದರ್ಶಿ, ಕರ್ನಾಟಕ ರೇರಾ
7) ಶಾಖಾಧಿಕಾರಿ-1, ಕರ್ನಾಟಕ ರೇರಾ
8) ಎಲ್ಲಾ ಅಧಿಕಾರಿಗಳು, ಕರ್ನಾಟಕ ರೇರಾ
9) ಸಿಸ್ಟಂ ಅನಾಲಿಸ್ಟ್ – ಅಂತರ್ಜಾಲ ಪುಟದಲ್ಲಿ ಪ್ರಕಟಿಸಲು
10) ಪ್ರಕಟಣೆ ಫಲಕ / ಶಾಖಾ ರಕ್ಷಕ ಕಡತ